# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ: 28ನೇ ಜುಲೈ, 2014**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಪ್ರಶ್ನೋತ್ತರ

| | | | |
|---|---|---|---|
| ಅ) | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ಇಪ್ಪತ್ತಾರನೆಯ ಪಟ್ಟಿ** |
| ಆ) | **ತಡೆಹಿಡಿಯಲಾದ ಪ್ರಶ್ನೆಗಳು:** | | |
| | (1) 21ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀಮತಿ ತಾರಾಅನೂರಾಧ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 305(1685) | : | **ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು** |
| | (2) 22ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಅಮರನಾಥ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 318(1726) | : | **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು** |
| ಇ) | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ಇಪ್ಪತ್ತಾರನೆಯ ಪಟ್ಟಿ** |

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2014ನೇ ಸಾಲಿನ "ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

## 03. ಶಾಸನ ರಚನೆ

### ಅ.ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**I. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014**

**ಶ್ರೀ ಶಿವರಾಜ್ ಎಸ್. ತಂಗಡಗಿ** (ಮಾನ್ಯ ಸಣ್ಣ ನೀರಾವರಿ ಸಚಿವರು) ಅವರು:-

01. ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2014ನೇ ಸಾಲಿನ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2

**II. ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2014**

**ಶ್ರೀ ವಿ. ಶ್ರೀನಿವಾಸ ಪ್ರಸಾದ್** (ಮಾನ್ಯ ಕಂದಾಯ ಸಚಿವರು) ಅವರು:-

01. ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

02. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ಆ. ಖಾಸಗಿ ಸದಸ್ಯರ ವಿಧೇಯಕದ ಮಂಡನೆ

**ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ವಿಧೇಯಕ, 2014**

**ಶ್ರೀ ಸಿ.ಹೆಚ್. ವಿಜಯಶಂಕರ್** (ಮಾನ್ಯ ವಿಧಾನ ಪರಿತ್ತಿನ ಸದಸ್ಯರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

01) **ಶ್ರೀ ಕೆ.ಬಿ. ಶಾಣಪ್ಪ** ಅವರು ಹೈದರಾಬಾದ್-ಕರ್ನಾಟಕದ ಅನೇಕ ಜಿಲ್ಲೆಗಳಲ್ಲಿ ಟೆನೆನ್ಸಿ ಕಾಯ್ದೆಯಡಿ 1974ರ ನಂತರ ಪರಿಶಿಷ್ಟ ವರ್ಗಕ್ಕೆ ಸೇರಿದ ಗೇಣಿದಾರರಿಗೆ ನ್ಯಾಯ ಸಿಗದಿರುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

02) **ಶ್ರೀಮತಿ ವಿಮಲಾಗೌಡ** ಅವರು ಬೆಂಗಳೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಹಾಗೂ ಮೈಸೂರು ನಗರಗಳಲ್ಲಿ ಮಾದಕ ವಸ್ತುಗಳ ಮಾರಾಟ ಜಾಲದ ಬಗ್ಗೆ **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

03) **ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮ ಸರ್ವೆ ನಂ: 60/1ರಲ್ಲಿ ಡಿಎಸ್‌ಕೆ ಸದರನ್ ಡೆವಲಪರ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಫ್ಲ್ಯಾಟ್ ಕಟ್ಟಲು ಅನುಮತಿ ನೀಡಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

04) **ಶ್ರೀಯುತರುಗಳಾದ: ಮರಿತಿಬ್ಬೇಗೌಡ, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ವಿ.ಪ.ಮು.ಸ. ಹಾಗೂ ಗೋ. ಮಧುಸೂದನ್** ಅವರುಗಳು ಸರ್ಕಾರಿ ಅಧಿಸೂಚನೆ ಸಂಖ್ಯೆ:ಇಡಿ:246:ಡಿಸಿಇ:2011, ದಿನಾಂಕ: 16.05.2014ರನ್ವಯ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಆಯ್ಕೆ ನೇಮಕಾತಿ ಪ್ರಕ್ರಿಯೆಯಲ್ಲಿ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಕೆಲವು ವಿಷಯಗಳನ್ನು ಸಮಾನಾಂತರ ವಿಷಯಗಳೆಂದು ಘೋಷಿಸುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ** ಗಮನ ಸೆಳೆಯುವುದು.

..3

05) **ಶ್ರೀ ರಾಮಚಂದ್ರಗೌಡ** ಅವರು ರಾಜ್ಯದಲ್ಲಿ ತೆರೆದ ಕೊಳವೆ ಬಾವಿಗಳಲ್ಲಿ ಮಕ್ಕಳ ಮರಣ ಪ್ರಕರಣಗಳು ಹೆಚ್ಚಾಗಿದ್ದು, ಬೋರ್‌ವೆಲ್ ಕೊರೆಸಿದ ಜಮೀನಿನ ಮಾಲೀಕರು ಹಾಗೂ ಕೊಳವೆ ಬಾವಿ ಕೊರೆದಿರುವ ಕಂಪನಿ ಮಾಲೀಕರಿಗೆ ಕಠಿಣ ಶಿಕ್ಷೆ ನೀಡುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

06) **ಶ್ರೀಯುತರುಗಳಾದ: ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ವಿ.ಪ.ಮು.ಸ., ಸಿ.ಹೆಚ್. ವಿಜಯಶಂಕರ್ ಹಾಗೂ ಬಿ.ಜೆ. ಪುಟ್ಟಸ್ವಾಮಿ** ಅವರುಗಳು ಕರ್ನಾಟಕ ವಿಧಾನ ಮಂಡಲ ಕಾರ್ಯಾಲಯದ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ನಡೆದಿರುವ ಅವ್ಯವಹಾರಗಳ ಕುರಿತಂತೆ ಆಡಳಿತಾಧಿಕಾರಿಯನ್ನು ನೇಮಿಸಲು ಆದೇಶವಾಗಿದ್ದರೂ ಸಹ ಈವರೆವಿಗೂ ಕ್ರಮಕೈಗೊಳ್ಳದಿರುವ ಬಗ್ಗೆ **ಮಾನ್ಯ ಸಹಕಾರ ಹಾಗೂ ಸಕ್ಕರೆ ಸಚಿವರ** ಗಮನ ಸೆಳೆಯವುದು.

07) **ಶ್ರೀ ವೈ.ಎ. ನಾರಾಯಣಸ್ವಾಮಿ** ಅವರು ಶ್ರೀನಿವಾಸಪುರ ತಾಲ್ಲೂಕಿನ ಯಚ್ಚನಹಳ್ಳಿ, ಕಂಬಾಲಹಳ್ಳಿ ಹಾಗೂ ಕುರುಮಾರಲಹಳ್ಳಿಗಳಿಗೆ ಹೋಗಲು ರಸ್ತೆ ಇಲ್ಲದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

08) **ಶ್ರೀ ಅರುಣ ಶಹಾಪುರ** ಅವರು ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರು ಇಲ್ಲದಿರುವುದರಿಂದ ಶೈಕ್ಷಣಿಕ ಗುಣಮಟ್ಟ ಕಡಿಮೆ ಆಗುತ್ತಿರುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರ** ಗಮನ ಸೆಳೆಯುವುದು.

09) **ಶ್ರೀ ಬಿ.ರಾಮಕೃಷ್ಣ** ಅವರು ಮದ್ದೂರು ತಾಲ್ಲೂಕು ಗೊಲ್ಲರದೊಡ್ಡಿ ಹಾಗೂ ಇತರೆ ಏಳು ಗ್ರಾಮಗಳಿಗೆ ಕುಡಿಯುವ ನೀರು ಸಮರ್ಪಕವಾಗಿ ಇಲ್ಲದಿರುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

10) **ಶ್ರೀಮತಿ ತಾರಾಅನೂರಾಧ** ಅವರು ಬೆಂಗಳೂರಿನ ಕಲಾಸಿಪಾಳ್ಯದಲ್ಲಿರುವ 'ಜಲಕಂಠೇಶ್ವರ ದೇವಸ್ಥಾನ"ದಲ್ಲಿ ಕಲ್ಯಾಣಿಗಳನ್ನು ಒತ್ತುವರಿ ಮಾಡಿರುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

11) **ಶ್ರೀ ಟಿ.ಎ. ಶರವಣ** ಅವರು ರಾಜ್ಯದಲ್ಲಿ ಚಿನ್ನ-ಬೆಳ್ಳಿ ವ್ಯಾಪಾರಿಗಳಿಗೆ ಪೋಲೀಸರಿಂದ ದಿನನಿತ್ಯ ಕಿರುಕುಳವಾಗುತ್ತಿರುವ ಬಗ್ಗೆ **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

12) **ಶ್ರೀಯುತರುಗಳಾದ: ಕವಟಗಿಮಠ ಮಲ್ಲಿಕಾರ್ಜುನ ಹಾಗೂ ಮಹಾಂತೇಶ್ ಶಿವಾನಂದ ಕೌಜಲಗಿ** ಅವರುಗಳು ಬೆಳಗಾವಿ ಜಿಲ್ಲೆಯಲ್ಲಿ ಕಳೆದ 36 ವರ್ಷಗಳಿಂದ ಮಹೇಶ್ವರಿ ಅಂಧ ಮಕ್ಕಳ ಶಾಲೆಯನ್ನು ನಡೆಸಿಕೊಂಡು ಬರುತ್ತಿರುವ ಸಂಸ್ಥೆಗೆ ಅನುದಾನ ಬಿಡುಗಡೆಗೊಳಿಸದಿರುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ** ಗಮನ ಸೆಳೆಯುವುದು.

13) **ಶ್ರೀಮತಿ ಮೋಟಮ್ಮ** ಅವರು ತರೀಕೆರೆ ತಾಲ್ಲೂಕಿನ ರಂಗಾಪೂರ ಹಾಗೂ ಗುಡ್ಡದ ಹಟ್ಟಿ ಗ್ರಾಮಗಳಲ್ಲಿ ನಿರಂತರ ವಿದ್ಯುತ್ ಸ್ಥಗಿತಗೊಳಿಸುತ್ತಿರುವ ಬಗ್ಗೆ **ಮಾನ್ಯ ಇಂಧನ ಸಚಿವರ** ಗಮನ ಸೆಳೆಯುವುದು.

14) **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಲ್ಲಿಗೆ ಕೃಷಿಗೆ ಉತ್ತೇಜನ ನೀಡುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ** ಗಮನ ಸೆಳೆಯುವುದು.

15) **ಶ್ರೀ ಅಮರನಾಥ ಪಾಟೀಲ್** ಅವರು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ನೀಡಲಾಗಿರುವ ಅನುದಾನವನ್ನು ಬಳಕೆ ಮಾಡಲು ಮಾನದಂಡಗಳು ಹಾಗೂ ಏಜೆನ್ಸಿಯನ್ನು ನಿರ್ದಿಷ್ಟಪಡಿಸದಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

..4

16) **ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡ ಹಾಗೂ ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರುಗಳು ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿರುವ ನೌಕರರಿಗೆ ನಿವೃತ್ತಿ ವೇತನವನ್ನು ಮಂಜೂರು ಮಾಡದಿರುವುದರಿಂದ, ನಿವೃತ್ತ ನೌಕರರಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

17) **ಶ್ರೀ ಹೆಚ್.ಎಂ.ರೇವಣ್ಣ** ಅವರು ಚನ್ನಪಟ್ಟಣ ತಾಲ್ಲೂಕು, ಕಸಬಾ ಹೋಬಳಿ ತಟ್ಟೇಕೆರೆ ಗ್ರಾಮದ ಸರ್ಕಾರಿ ಹಿಂದೂ ಸ್ಮಶಾನವನ್ನು ಭೂಮಾಫಿಯಾಗಳು ಕಾನೂನು ಬಾಹಿರವಾಗಿ ಕಬಳಿಸಿರುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

18) **ಶ್ರೀಯುತರುಗಳಾದ: ಅಲ್ಲಮಪ್ರಭು ಪಾಟೀಲ್, ಶರಣಪ್ಪ ಮಟ್ಟೂರ, ಮಹಾಂತೇಶ್ ಶಿವಾನಂದ ಕೌಜಲಗಿ ಹಾಗೂ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ** ಅವರುಗಳು ಕೆ.ಪಿ.ಟಿ.ಸಿ.ಎಲ್, ಕೆ.ಪಿ.ಸಿ.ಎಲ್, ಪಿ.ಕೆ.ಸಿ.ಎಲ್ ಹಾಗೂ ನಾಲ್ಕು ಕಂಪನಿಗಳಾದ ಬೆಸ್ಕಾಂ, ಚೆಸ್ಕಾಂ, ಹೆಸ್ಕಾಂ ಮತ್ತು ಜೆಸ್ಕಾಂ ಗುತ್ತಿಗೆದಾರರು ಅಥವಾ ವಿದ್ಯುತ್ ಸರಬರಾಜು ಮಾಡುವ ಕಾಮಗಾರಿ ಗುತ್ತಿಗೆದಾರರ ಪ್ರಕರಣಗಳು ನ್ಯಾಯಾಲಯದಲ್ಲಿರುವ ಬಗ್ಗೆ **ಮಾನ್ಯ ಇಂಧನ ಸಚಿವರ** ಗಮನ ಸೆಳೆಯುವುದು.

## ೦5. ನಿಯಮ ೩೩೦ರ ಮೇರೆಗೆ

೦1) **ಶ್ರೀ ಬಿ.ಜೆ. ಪುಟ್ಟಸ್ವಾಮಿ** ಅವರು ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನಡೆಯುತ್ತಿರುವ ಕಳಪೆ, ಅವೈಜ್ಞಾನಿಕ ಕಾಮಗಾರಿಗಳು, ಆದಾಯದಲ್ಲಿ ಸೋರಿಕೆ ಮತ್ತು ಇತರೆ ಹಲವಾರು ಅವ್ಯವಹಾರಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಯವರು)**

೦2) **ಶ್ರೀ ಪಟೇಲ್ ಶಿವರಾಂ** ಅವರು ಹಾಸನದಿಂದ ಚಿಕ್ಕನಾಯಕನಹಳ್ಳಿಗೆ ದುದ್ದ ಮಾರ್ಗವಾಗಿ ಸಂಪರ್ಕ ಕಲ್ಪಿಸುವ ರಸ್ತೆಯು ಸುಮಾರು ವರ್ಷಗಳಿಂದ ಸಂಚರಿಸಲು ಯೋಗ್ಯವಿಲ್ಲದೆ ವಾಹನ ಚಾಲಕರು ದಿನ ನಿತ್ಯ ನರಕಯಾತನೆ ಅನುಭವಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಲೋಕೋಪಯೋಗಿ ಸಚಿವರು)**

೦3) **ಶ್ರೀ ಲಹರ್‌ಸಿಂಗ್ ಸಿರೋಯಾ** ಅವರು ಬೆಂಗಳೂರು ಮಹಾನಗರದಲ್ಲಿ ವಾಹನಗಳ ದಟ್ಟನೆಯಿಂದ ಸಾರಿಗೆ ಸಂಚಾರದಲ್ಲಿ ಅವ್ಯವಸ್ಥೆ ಉಂಟಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಗೃಹ ಸಚಿವರು)**

## ೦6. ಇಲಾಖಾ ನೀತಿ ಮತ್ತು ಕಾರ್ಯಾಚರಣೆ ಬಗ್ಗೆ ಚರ್ಚೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೀತಿ ಮತ್ತು ಕಾರ್ಯಾಚರಣೆ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

**ವಿ. ಶ್ರೀಶ್**
**ಕಾರ್ಯದರ್ಶಿ**

---